ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಸ್ಮಾರ್ಟ್‌ಸಿಟಿ ಯೋಜನೆ ಕಾಮಗಾರಿಗಳ ಕುರಿತು

ಶ್ರೀ ಆಯನೂರು ಮಂಜುನಾಥ್(ಪದವೀಧರರ ಕ್ಷೇತ್ರ):-

1508 (1802) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಿವಮೊಗ್ಗ ಮಹಾನಗರ ಪಾಲಿಕೆಯಲ್ಲಿ ಸ್ಮಾರ್ಟ್‌ಸಿಟಿ ಯೋಜನೆಯಲ್ಲಿ ಎಷ್ಟು ವಾರ್ಡಿನ ಯಾವ ಯಾವ ಕಾಮಗಾರಿಗಳನ್ನು ಯಾವ ಯಾವ ಕಂಪನಿ/ಗುತ್ತಿಗೆದಾರರಿಂದ ನಡೆಸಲಾಗುತ್ತಿದೆ ; ಈ ಹಿಂದೆ ಸ್ಮಾರ್ಟ್‌ಸಿಟಿ ಅನುಮೋದನೆಗೆ ಕಳುಹಿಸುವಾಗ ಕೈಗೊಳ್ಳಬೇಕಾದ ಕಾಮಗಾರಿಯ ಹೆಸರು ಮತ್ತು ಮೊತ್ತ ಹಾಗೂ ಸ್ಮಾರ್ಟ್‌ಸಿಟಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಅನುಮೋದನೆಗೊಂಡ ನಂತರ ವಿಂಗಡಣೆಯಾದ ಮೊತ್ತವೆಷ್ಟು; (ವಾರ್ಡ್‌ವಾರು ವಿವರ ನೀಡುವುದು)

(ಆ) ಆಯ್ಕೆ ಮಾಡಿರುವ ವಾರ್ಡಿನಲ್ಲಿ ಯಾವ ಯಾವ ಕಾಮಗಾರಿ ಕೈಗೊಳ್ಳಲು ಕ್ರಿಯಾ ಯೋಜನೆ ನಿಗದಿಪಡಿಸಲಾಗಿದೆ ; (ಲೆಕ್ಕಶೀರ್ಷಿಕೆವಾರು ವಿವರ ಒದಗಿಸುವುದು)

(ಇ) ಕಾಮಗಾರಿ ಪೂರ್ಣಗೊಳಿಸಲು ಗುತ್ತಿಗೆದಾರರಿಗೆ/ಕಂಪನಿಗಳಿಗೆ ನಿಗದಿಪಡಿಸಿದ ಕಾಲಾವಕಾಶವೆಷ್ಟು ; ನಿಗದಿತ ಕಾಲಾವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸದಿರುವ ಗುತ್ತಿಗೆದಾರರ /ಕಂಪನಿಗಳಾವುವು; ಯಾವ ಯಾವ ಕಾರಣಗಳಿಂದ ಕಾಮಗಾರಿ ಪೂರ್ಣಗೊಳಿಸಿರುವುದಿಲ್ಲ ಮತ್ತು ನಿಗದಿತ ಕಾಲಾವಧಿಯೊಳಗೆ ಪೂರ್ಣಗೊಳಿಸದ ಕಂಪನಿ/ಗುತ್ತಿಗೆದಾರರ ಮೇಲೆ ಕೈಗೊಂಡ ಕ್ರಮಗಳ ಬಗ್ಗೆ ವಿವರ ಒದಗಿಸುವುದು ;

(ಈ) ಸ್ಮಾರ್ಟ್‌ಸಿಟಿಯಲ್ಲಿ ಕೈಗೊಳ್ಳಬೇಕಾದ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ನಿಗದಿಪಡಿಸಿದ ಕಾಲಾವಕಾಶವೆಷ್ಟು; ಕಾಮಗಾರಿ ಪೂರ್ಣಗೊಳಿಸದೇ ಇರುವ ಕಡೆ ಸ್ಮಾರ್ಟ್‌ಸಿಟಿ ಕಛೇರಿಯಿಂದ ನಿಯೋಜಿತ ಇಂಜಿನಿಯರ್‌ಗಳಿಂದ ಪಡೆದ ಮಾಹಿತಿ ಹಾಗೂ ಇಂಜಿನಿಯರುಗಳ ಹೆಸರು ಮತ್ತು ಪದನಾಮವೇನು ;

(ಉ) ಕಾಮಗಾರಿ ಕಳಪೆ ಹಾಗೂ ಅವೈಜ್ಞಾನಿಕಾಗಿ ಮಾಡಿರುವ ಬಗ್ಗೆ ಸ್ಥಳೀಯರಿಂದ ಹಲವಾರು ದೂರುಗಳು ಬಂದಿದ್ದು, ಇವುಗಳ ಬಗ್ಗೆ ತೆಗೆದುಕೊಂಡ ಕ್ರಮವೇನು ; ಹಾಗೂ ಕಾಮಗಾರಿಯ ಸ್ಥಳ ವೀಕ್ಷಣೆ ಮಾಡಿ ಸರ್ಕಾರಕ್ಕೆ ವರದಿ ನೀಡುವವರು ಯಾರು ?